# ಕರ್ನಾಟಕ ಸರ್ಕಾರ

ಸಂಖ್ಯೆ: ಪಸಂಮೀ 200 ಪಅಸೇ 2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ:22.02.2017

## ಜಾಹೀರಾತು

ವಿಷಯ: ಕರ್ನಾಟಕ ಪಶುವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ, ಕುಲಪತಿಗಳ ಹುದ್ದೆಯ ನೇಮಕಾತಿಗೆ ಅರ್ಜಿ ಆಹ್ವಾನ.

*****

ಕರ್ನಾಟಕ ಪಶುವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ, ಕುಲಪತಿ ಹುದ್ದೆಯು ತೆರವಾಗಿದ್ದು, ಈ ಕೆಳಕಂಡ ಅರ್ಹತೆಯುಳ್ಳ ಪ್ರಾಧ್ಯಾಪಕರು/ಶಿಕ್ಷಣ ತಜ್ಞರುಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆದ್ದರಿಂದ, ವಿಶ್ವವಿದ್ಯಾಲಯದ ಧನಸಹಾಯ ಆಯೋಗದ ಮಾರ್ಗಸೂಚಿಗಳು ಮತ್ತು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ, 2004ರನ್ವಯ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಯವರಾಗಿ ನೇಮಕ ಹೊಂದಲು ಬಯಸುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಪಶುವೈದ್ಯಕೀಯ ವಿಜ್ಞಾನ/ಪಶುವಿಜ್ಞಾನ/ಹೈನುವಿಜ್ಞಾನ/ಮೀನುಗಾರಿಕೆ ವಿಜ್ಞಾನ ಹಾಗೂ ಈ ಸಂಬಂಧಿತ ಕ್ಷೇತ್ರದಲ್ಲಿ ಪ್ರಾಧ್ಯಾಪಕ ಅಥವ ತತ್ಸಮಾನ ವೃಂದದಲ್ಲಿ 10 ವರ್ಷ ಅಥವಾ ಅದಕ್ಕೂ ಮೇಲ್ಪಟ್ಟ ಅವಧಿಗೆ ಸೇವೆ ಸಲ್ಲಿಸಿರತಕ್ಕದ್ದು. ಅರ್ಜಿ ಸಲ್ಲಿಸಲು ಬಯಸುವ ಅರ್ಹ ಅಭ್ಯರ್ಥಿಗಳು/ಅಧಿಕಾರಿಗಳು ತಮ್ಮ ಸಂಪೂರ್ಣ ಸೇವಾ ವಿವರಗಳುಳ್ಳ ಅರ್ಜಿಗಳನ್ನು ನಿಗಧಿತ ನಮೂನೆಯಲ್ಲಿ, ಅವಶ್ಯವಿರುವ ವಿವರ/ದಾಖಲೆಗಳೊಂದಿಗೆ 6 ಪ್ರತಿಗಳಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆಗಳ ಇಲಾಖೆ, ನಂ.405, ನಾಲ್ಕನೆ ಮಹಡಿ, ವಿಕಾಸ ಸೌಧ, ಬೆಂಗಳೂರು-560001 ರವರಿಗೆ ಈ ಜಾಹೀರಾತು ಪ್ರಕಟಣೆಯಾದ ಇಪ್ಪತ್ತು (20) ದಿನಗಳೊಳಗಾಗಿ ಸಲ್ಲಿಸತಕ್ಕದ್ದು.

ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ನಮೂನೆಯನ್ನು ಕರ್ನಾಟಕ ಪಶುವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್ ನಲ್ಲಿ (www.kvafsu.kar.nic.in) ಪಡೆಯುವುದು.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ